ಹಾಸನ ಜಿಲ್ಲೆಯಲ್ಲಿ ಓ.ಬಿ.ಸಿ. ಹಾಸ್ಟೆಲುಗಳ ಮಂಜೂರಾತಿ.

3755 - ಶ್ರೀ ಕೆ.ಹೆಚ್ ಹನುಮೇಗೌಡ (ಹಾಸನ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆಯ ಯಾವ ಯಾವ ಅಸೆಂಬ್ಲಿ ಕ್ಷೇತ್ರಗಳಲ್ಲಿ ಪ್ರೌಢ ಶಾಲೆಯ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಓ.ಬಿ.ಸಿ. ಹಾಸ್ಟೆಲ್‌ಗಳನ್ನು ಸರ್ಕಾರ ಮಂಜೂರು ಮಾಡಿದೆ. (ವಿವರಗಳನ್ನೊದಗಿಸುವುದು)

ಆ) ಆಯಾ ವಿದ್ಯಾರ್ಥಿನಿಲಯಗಳಲ್ಲಿ ಎಷ್ಟೆಷ್ಟು ವಿದ್ಯಾರ್ಥಿಗಳಿದ್ದಾರೆ?

ಶ್ರೀ ಬಿ. ಶಿವಣ್ಣ (ಸಮಾಜ ಕಲ್ಯಾಣ ಸಚಿವರು):

ಅ)

ವಿಧಾನಸಭಾ ಕ್ಷೇತ್ರದ ಹೆಸರು	ನಿಲಯಗಳ ಸಂಖ್ಯೆ	ವಿದ್ಯಾರ್ಥಿಗಳ ಸಂಖ್ಯೆ
1. ಹಾಸನ	4	200
2. ಗಂಡಸಿ	2	100
3. ಆರಸೀಕೆರೆ	3	140
4. ಹೊಳೆನರಸೀಪುರ	5	250
5. ಶ್ರವಣಬೆಳಗೊಳ	4	170
6. ಅರಕಲಗೂಡು	4	180
7. ಬೇಲೂರು	2	90
8. ಸಕಲೇಶಪುರ	4	200
	28	1330

ಹರಿಹರ ಸರ್ಕಾರಿ ಆಸ್ಪತ್ರೆ ಎಕ್ಸರೇ ಕಟ್ಟಡ

3763 - ಡಾ|| ವೈ. ನಾಗಪ್ಪ (ಹರಿಹರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು, ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಚಿತ್ರದುರ್ಗ ಜಿಲ್ಲೆ ಹರಿಹರ ಸರ್ಕಾರಿ ಆಸ್ಪತ್ರೆಗೆ ದಾನಿಯೊಬ್ಬರು ಎಕ್ಸ್‌ರೇ ಪ್ಲಾಂಟ್ ಕಟ್ಟಡಕ್ಕೆ 25,000-00 ರೂ. ದೇಣಿಗೆ ಕೊಟ್ಟಿರುವುದು ತಮ್ಮ ಗಮನಕ್ಕೆ ಬಂದಿದೆಯೇ?

2) ದೇಣಿಗೆ ಕೊಟ್ಟು ಎಷ್ಟು ವರ್ಷಗಳಾದವು? ಇದರ ಬಗ್ಗೆ ತೆಗೆದುಕೊಂಡ ಕ್ರಮ ಏನು ಮತ್ತು ಯಾವಾಗ ಇದನ್ನು ಸಂಪೂರ್ಣಗೊಳಿಸಲಾಗುವುದು?

ಶ್ರೀ ಜಿ. ಪುಟ್ಟಿಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಬಂದಿಲ್ಲ.

ಆ) ಉದ್ಭವಿಸುವುದಿಲ್ಲ.

3ನೇ ಮತ್ತು 4ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಬಗ್ಗೆ.

3765 - ಶ್ರೀ ಆಂಜನಮೂರ್ತಿ (ನೆಲಮಂಗಲ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 3ನೇ ಮತ್ತು 4ನೇ ತರಗತಿಯಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳನ್ನು ಸಾರ್ವಜನಿಕ ಹಾಸ್ಟೆಲ್‌ಗಳಲ್ಲಿ ಸೇರಿಸಿಕೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ.